## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ರಾಜೀವ ಗಾಂಧಿ ಪಂಚಾಯತಿ ಸಶಕ್ತೀಕರಣ ಅಭಿಯಾನ ಯೋಜನೆಯ ಅನುಷ್ಠಾನಕ್ಕೆ ಸಂಬಂಧಿಸಿದಂತೆ ಕರೆಯಲಾದ ಟೆಂಡರ್‌ಗಳನ್ನು ಪರಿಶೀಲಿಸಲು ಟೆಂಡರ್ ಪರಿಶೀಲನಾ ಸಮಿತಿಯನ್ನು ರಚಿಸುವ ಕುರಿತು.

**ಓದಲಾಗಿದೆ:** ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಸಚಿವರ ಟಿಪ್ಪಣಿ ಸಂಖ್ಯೆ ಗ್ರಾಅಪ/ಆಕಾ/2014-15, ಬೆಂಗಳೂರು ದಿನಾಂಕ: 10.07.2014

**ಪ್ರಸ್ತಾವನೆ:-**

ರಾಜೀವ ಗಾಂಧಿ ಪಂಚಾಯತಿ ಸಶಕ್ತೀಕರಣ ಅಭಿಯಾನ ಯೋಜನೆಯಡಿ ಇರುವ ಎಲ್ಲಾ ಉಪನಿಬಂಧನೆಗಳು/ಪ್ರಕ್ರಿಯೆಗಳನ್ನು ಅನುಷ್ಠಾನಗೊಳಿಸುವ ಸಲುವಾಗಿ, ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮ 1999ರ ಪ್ರಕರಣ 10ರನ್ವಯ "Tender Accepting Authority" ಅಂದರೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಗೆ ಸಂಬಂಧಿಸಿದಂತೆ ಸರ್ಕಾರದ ಕಾರ್ಯದರ್ಶಿ(ಪಂ.ರಾಜ್)ಗಳಿಗೆ ಪ್ರದತ್ತವಾಗಿರುವ ಅಧಿಕಾರದನ್ವಯ, ಯೋಜನೆಯ ಕಾಮಗಾರಿಗಳಿಗೆ ಸಂಬಂಧಿಸಿದ ಸಾಮಗ್ರಿಗಳು/ ಮಾನವ ಸಂಪನ್ಮೂಲ ಸಂಸ್ಥೆಗಳಿಂದ ಸಿಬ್ಬಂದಿಗಳನ್ನು ಪಡೆಯಲು ಮತ್ತು ಯೋಜನೆಗೆ ಸಂಬಂಧಿಸಿದ ಎಲ್ಲಾ ಉಪನಿಬಂಧನೆಗಳ ಪ್ರಕ್ರಿಯೆಗಳನ್ನು ಅನುಷ್ಠಾನಗೊಳಿಸಲು, ತಜ್ಞ ಅಧಿಕಾರಿಗಳನ್ನೊಳಗೊಂಡ ಟೆಂಡರ್ ಪರಿಶೀಲನಾ ಸಮಿತಿಯನ್ನು ರಚಿಸುವುದು ಅವಶ್ಯಕವೆಂದು ತೀರ್ಮಾನಿಸಲಾಗಿರುತ್ತದೆ. ಆದುದರಿಂದ ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/255/ಜಿಪಸ/2014 ಬೆಂಗಳೂರು. ದಿನಾಂಕ:21.08.2014**

ಪ್ರಸ್ತಾವನೆಯಲ್ಲಿ ವಿವರಿಸಿದಂತೆ, ರಾಜೀವ ಗಾಂಧಿ ಪಂಚಾಯತಿ ಸಶಕ್ತೀಕರಣ ಅಭಿಯಾನ ಯೋಜನೆಯಡಿ ಇರುವ ಎಲ್ಲಾ ಉಪನಿಬಂಧನೆಗಳು ಮತ್ತು ಪ್ರಕ್ರಿಯೆಗಳನ್ನು ಅನುಷ್ಠಾನಗೊಳಿಸಲು, ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮ 1999ರ ಪ್ರಕರಣ 10ರನ್ವಯ ಸರ್ಕಾರದ ಕಾರ್ಯದರ್ಶಿಗಳು(ಪಂ.ರಾಜ್), ಗ್ರಾಮೀಣಾಭಿವೃದ್ಧಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಅಂದರೆ ಟೆಂಡರ್ ಅಂಗೀಕಾರ ಪ್ರಾಧಿಕಾರ ಇವರಿಗೆ ಪ್ರದತ್ತವಾಗಿರುವ ಅಧಿಕಾರದನ್ವಯ, ಈ ಕೆಳಕಂಡ ಅಧಿಕಾರಗಳನ್ನೊಳಗೊಂಡ **"ಟೆಂಡರ್ ಪರಿಶೀಲನಾ ಸಮಿತಿಯನ್ನು"** ರಚಿಸಿ ಆದೇಶಿಸಿದೆ.

| ಕ್ರಮ ಸಂಖ್ಯೆ | ಅಧಿಕಾರಿಯ ಪದನಾಮ | ಸ್ಥಾನಮಾನ |
|---|---|---|
| 1. | ಸರ್ಕಾರದ ಕಾರ್ಯದರ್ಶಿಗಳು(ಪಂ.ರಾಜ್), ಗ್ರಾಅ ಮತ್ತು ಪಂ.ರಾಜ್ ಇಲಾಖೆ | ಅಧ್ಯಕ್ಷರು |
| 2. | ಆಯುಕ್ತರು, ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ, ಗ್ರಾಅ ಮತ್ತು ಪಂ.ರಾಜ್ ಇಲಾಖೆ | ಸದಸ್ಯರು |
| 3. | ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಇ-ಆಡಳಿತ ಕೇಂದ್ರ, ಸಿಆಸುಇ (ಇ-ಆಡಳಿತ) | ಸದಸ್ಯರು |
| 4. | ಅಪರ ಕಾರ್ಯದರ್ಶಿ (ಆಡಳಿತ), ಗ್ರಾಅ ಮತ್ತು ಪಂ ರಾಜ್ ಇಲಾಖೆ. | ಸದಸ್ಯರು |
| 5. | ನಿರ್ದೇಶಕರು (ಪಂ. ರಾಜ್-1), ಗ್ರಾಅ ಮತ್ತು ಪಂ.ರಾಜ್ ಇಲಾಖೆ | ಸದಸ್ಯರು |
| 6. | ಅಪರ ಮುಖ್ಯಸ್ಥರು(ಕಾರ್ಯಾಚರಣೆ) ಗ್ರಾಮಸ್ವರಾಜ್ ಯೋಜನೆ, ಗ್ರಾಅ ಮತ್ತು ಪಂ. ರಾಜ್ ಇಲಾಖೆ | ಸದಸ್ಯರು |
| 7. | ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಅ ಮತ್ತು ಪಂ.ರಾಜ್ ಇಲಾಖೆ | ಸದಸ್ಯರು |
| 8. | ನಿರ್ದೇಶಕರು (ಪಂ. ರಾಜ್-2), ಗ್ರಾಅ ಮತ್ತು ಪಂ.ರಾಜ್ ಇಲಾಖೆ | ಸದಸ್ಯ ಕಾರ್ಯದರ್ಶಿ |

ಕರ್ನಾಟಕ ರಾಜ್ಯ ಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

ಎಸ್.ಎನ್.ಕಲಾವತಿ

(ಎಸ್.ಎನ್.ಕಲಾವತಿ)
ಸರ್ಕಾರದ ಅಧೀನ ಕಾರ್ಯದರ್ಶಿ(ಪ್ರ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**ಗೆ,**

1. ಮಹಾಲೇಖಪಾಲಕರು, ಕರ್ನಾಟಕ ಸರ್ಕಾರ, ಬೆಂಗಳೂರು/ಧಾರವಾಡ.
2. ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ ಬೆಂಗಳೂರು.
3. ಸಂಬಂಧಿಸಿದ ಅಧಿಕಾರಿಗಳಿಗೆ.

ಪ್ರತಿಯನ್ನು ಈ ಕೆಳಕಂಡವರ ಮಾಹಿತಿಗಾಗಿ ಸಲ್ಲಿಸಿದೆ.

1. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳಿಗೆ.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು ಹಾಗೂ ಅಭಿವೃದ್ಧಿ ಆಯುಕ್ತರು, ವಿಧಾನಸೌಧ, ಬೆಂಗಳೂರು ಇವರ ಆಪ್ತ ಕಾರ್ಯದರ್ಶಿಗಳು
3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಕರ್ನಾಟಕ ಸರ್ಕಾರ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು
4. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಇ–ಆಡಳಿತ, ಬೆಂಗಳೂರು.
5. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಸಿಆಸುಇ (ಆಡಳಿತ ಸುಧಾರಣೆ), ಕರ್ನಾಟಕ ಸರ್ಕಾರದ ಸಚಿವಾಲಯ, ಬೆಂಗಳೂರು.
6. ಸರ್ಕಾರದ ಕಾರ್ಯದರ್ಶಿಗಳು (ಪಂ.ರಾ), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು.
7. ಅಪರ ಕಾರ್ಯದರ್ಶಿ(ಆಡಳಿತ), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರ ಆಪ್ತ ಸಹಾಯಕರಿಗೆ.
8. ಮುಖ್ಯ ಕಾರ್ಯಾಚರಣೆ ಅಧಿಕಾರಿ, ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರ ಆಪ್ತ ಸಹಾಯಕರಿಗೆ.
9. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
10. ವಿಶೇಷ ಅಧಿಕಾರಿ, ಗಣಕ ಕೋಶ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರಿಗೆ ಮಾಹಿತಿಗಾಗಿ ಹಾಗೂ ಸದರಿ ಆದೇಶವನ್ನು ಇಲಾಖೆಯ ವೆಬ್‌ಸೈಟ್‌ನಲ್ಲಿ ಅಳವಡಿಸಲು ಕೋರಿದೆ.
11. ಮುಖ್ಯ ಸಂಪಾದಕರು ಹಾಗೂ ಸಾರ್ವಜನಿಕ ಸಂಪರ್ಕ ಅಧಿಕಾರಿಗಳು, ಕರ್ನಾಟಕ ವಿಕಾಸ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರ ಮಾಹಿತಿಗಾಗಿ ಹಾಗೂ ಸದರಿ ಆದೇಶವನ್ನು ಮುಂದಿನ ಸಂಚಿಕೆಯಲ್ಲಿ ಕರ್ನಾಟಕ ವಿಕಾಸದಲ್ಲಿ ಪ್ರಕಟಿಸಲು ಕೋರಿದೆ.
12. ಹೆಚ್ಚುವರಿ ಪ್ರತಿ ಹಾಗೂ ಮಹಾ ಕಡತ.